**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

## ಸಿ.ಸಿ.ನಂ. 734/2017

| | | |
|---|---|---|
| ಸಾಕ್ಷಿದಾರರ ಹೆಸರು | : | ಸಿದ್ಧರಾಜು |
| ತಂದೆಯ ಹೆಸರು | : | ಕರೀಗೌಡ |
| ವಯಸ್ಸು | : | 46 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಗುಜ್ಜೇಗೌಡಗನಪುರ ಗ್ರಾಮ, ಮೈಸೂರು. |

**ಸಾಕ್ಷಿಯನ್ನು ದಿನಾಂಕಃ 11.10.2023 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

4 ಮತ್ತು 5ನೇ ಆರೋಪಿಗಳು ನನಗೆ ಪರಿಚಯ ಮತ್ತು ಉಳಿದ ಆರೋಪಿಗಳು ನನಗೆ ಪರಿಚಯವಿಲ್ಲ. ಈಗ ನನಗೆ ತೋರಿಸುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದ್ದು, ಸದರಿ ಸಹಿಯನ್ನು ಹೆಚ್.ಡಿ. ಕೋಟೆ ಪೋಲೀಸ್ ಠಾಣೆಯಲ್ಲಿ ಹಾಕಿರುತ್ತೇನೆ. ಸಾಕ್ಷಿಯು ದಿನಾಂಕಃ 16.07.2017ರ ಸ್ಥಳ ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು ನಿ.ಪಿ.–4 ಎಂದು, ಅದರಲ್ಲಿರುವ ಸಾಕ್ಷಿಯು ಸಹಿಯನ್ನು ನಿ.ಪಿ.–4(ಎ) ಎಂದು ಗುರುತಿಸಲಾಯಿತು. ನಿ.ಪಿ.–4 ರಲ್ಲಿ ಏನೆಲ್ಲಾ ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ. ಈಗ ನನಗೆ ತೋರಿಸುತ್ತಿರುವ 02 ಭಾವಚಿತ್ರಗಳಲ್ಲಿ ನನ್ನ ಭಾವಚಿತ್ರ ಕೂಡ

ಇದ್ದು, ಸದರಿ ಭಾವಚಿತ್ರಗಳಲ್ಲಿ ಕಂಡುಬರುವ ದೇವಸ್ಥಾನ ನಮ್ಮ ಊರಿನ ದೇವಸ್ಥಾನವಾಗಿರುತ್ತದೆ. ಸಾಕ್ಷಿಯು 02 ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದರಿಂದ, ಅವುಗಳನ್ನು ಕ್ರಮವಾಗಿ ನಿ.ಪಿ.-5 ಮತ್ತು ನಿ.ಪಿ.-6 ಎಂದು ಗುರುತಿಸಲಾಯಿತು. ನಾನು ನಮ್ಮ ಜಮೀನಿನಲ್ಲಿ ಕೆಲಸ ಮಾಡುತ್ತಿರುವಾಗ ಪೋಲೀಸರು ಬಂದು ಫೋಟೋ ತೆಗೆಯಬೇಕು ಬಾ ಎಂದು ಹೇಳಿದ್ದರಿಂದ ನಾನು ಹೋಗಿ ಅವರ ಜೊತೆ ಭಾವಚಿತ್ರ ತೆಗೆಸಿಕೊಂಡಿರುತ್ತೇನೆ. ನಾನು ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅ ರವರಿಂದಃ**

1 ನೇ ಆರೋಪಿ ಈ ಪ್ರಕರಣದ ಬಾದಿತಳಾದ ಚಾಸಾ-1 ರವರನ್ನು 3 ನೇ ಆರೋಪಿಯ ಮನೆಗೆ ಕರೆದುಕೊಂಡು ಬಂದು ಇರಿಸಿದ್ದು, ನಂತರ ಆಕೆಗೆ ಇಷ್ಟವಿಲ್ಲದಿದ್ದರು ಮತ್ತು ಆಕೆ ಅಪ್ರಾಪ್ತ ವಯಸ್ಕಳಾಗಿದ್ದರು 4 ನೇ ಆರೋಪಿಯ ಜೊತೆ ಬಾಲ್ಯ ವಿವಾಹ ಮಾಡಿದ ಸ್ಥಳವನ್ನು ತೋರಿಸುವುದಾಗಿ ಹೇಳಿದ್ದು, ಅದರಂತೆ ಚಾಸಾ-1 ಮತ್ತು 1 ನೇ ಆರೋಪಿ ದಿನಾಂಕಃ 16.07.2017 ರಂದು ನಮ್ಮ ಊರಿನ ಹೊರಭಾಗದಲ್ಲರುವ ಶ್ರೀ ಬಸವೇಶ್ವರ ದೇವಸ್ಥಾನದ ಬಳಿ ಬಂದಿದ್ದ ಪೋಲೀಸರಿಗೆ ಜಾಗವನ್ನು ತೋರಿಸಿದ್ದು, ಆ ಸಂದರ್ಭದಲ್ಲಿ ಪೋಲೀಸರು ನನ್ನನ್ನು ಪಂಚರಾಗಬೇಕೆಂದು ಕೇಳಿರುತ್ತಾರೆಂದರೆ ಸರಿಯಲ್ಲ. ನಂತರ ನಾನು ಅದಕ್ಕೆ ಒಪ್ಪಿ ಸ್ಥಳದಲ್ಲಿ ತಯಾರಿಸಿದ ಮಹಜರ್ ನ ವಿಷಯಗಳನ್ನು ತಿಳಿದುಕೊಂಡು ಸ್ಥಳದಲ್ಲಿಯೇ

ನಿ.ಪಿ.–4 ಕ್ಕೆ ಸಹಿ ಮಾಡಿ ನಂತರ ನಿ.ಪಿ.–5 ಮತ್ತು ನಿ.ಪಿ.–6 ರಂತೆ ಭಾವಚಿತ್ರಗಳನ್ನು ತೆಗೆಸಿಕೊಂಡಿರುತ್ತೇನೆಂದರೆ ಸರಿಯಲ್ಲ. ಈಗ ನನಗೆ ಓದಿ ಹೇಳಿದಂತೆ ಪೋಲೀಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ಸದರಿ ಹೇಳಿಕೆಯನ್ನು ಅಲ್ಲಗಳೆದಿದ್ದರಿಂದ ಕೆಂಪು ಶಾಹಿಯಿಂದ ಗುರುತಿಸಲಾದ ಸದರಿ ಹೇಳಿಕೆಯ ಭಾಗವನ್ನು ನಿ.ಪಿ.–7 ಎಂದು ಗುರುತಿಸಲಾಯಿತು. ಆರೋಪಿಗಳು ನಮ್ಮ ಊರಿನವರೇ ಆಗಿರುವುದರಿಂದ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಿಂದಃ ಏನೂ ಇರುವುದಿಲ್ಲ.**</u>

<u>**ಮರು ವಿಚಾರಣೆ: ಇರುವುದಿಲ್ಲ.**</u>

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**